ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎಸ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೋಲೀಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.

ಸಂಖ್ಯೆ: DPA/TP/CC/134/2023-24 | 1687-) ದಿನಾಂಕ: 30 MAR 2024

## "ಪ್ರಾರಂಭಿಕ ಪ್ರಮಾಣ ಪತ್ರ"

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)**
**(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)**

ವಿಷಯ: ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಅದ್ದೆವಿಶ್ವನಾಥಪುರ ಗ್ರಾಮದ ಸ.ನಂ. 200/7, 200/9, 200/10 ಮತ್ತು 201/2 ರ ಖಾತಾ ಸಂಖ್ಯೆ 2007/200/9/200/10/201/2 ರ 5336.71 ಚ.ಮೀ. (ಸ್ವತ್ತಿನ ಸಂಖ್ಯೆ: 150200200 600325054) ವಿಸ್ತೀರ್ಣದ ಪ್ರದೇಶದಲ್ಲಿ 'ವಸತಿ' ಉಪಯೋಗದ ಕಟ್ಟಡ ಕಟ್ಟಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿ ಸಲ್ಲಿಸಿರುವ ಅರ್ಜಿಯ ಬಗ್ಗೆ.

ಉಲ್ಲೇಖ:
1) ಅರ್ಜಿದಾರರ ಅರ್ಜಿ ಸಂಖ್ಯೆ ಮತ್ತು ದಿನಾಂಕ : 1983 ದಿನಾಂಕ: 21/02/2024.
2) ಈ ಪ್ರಾಧಿಕಾರದ ಸಮ ಸಂಖ್ಯೆಯ ಪತ್ರ ದಿನಾಂಕ: 04/03/2024.
3) ಪ್ರಾಧಿಕಾರಕ್ಕೆ ಶುಲ್ಕವನ್ನು ಪಾವತಿಸಿರುವ ವಿವರ: ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ 2038 ರ ದಿನಾಂಕ: 05/03/2024 ರಂತೆ ರೂ. 3,37,400/- (ಮೂರು ಲಕ್ಷದ ಮೂವತ್ತೇಳು ಸಾವಿರದ ನಾಲ್ಕು ನೂರು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಿರುತ್ತಾರೆ.

*********

ಮೆ॥ ಸೂರ್ಯ ಡೆವಲಪರ್ಸ್ ಪರವಾಗಿ ಶ್ರೀ ಹೆಚ್. ಪ್ರಶಾಂತ್‌ಕುಮಾರ್ ಬಿನ್ ಶಿವಾನಂದಯ್ಯ ಹೆಚ್., ರವರು ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಅದ್ದೆವಿಶ್ವನಾಥಪುರ ಗ್ರಾಮದ ಸ.ನಂ. 200/7, 200/9, 200/10 ಮತ್ತು 201/2 ರ ಖಾತಾ ಸಂಖ್ಯೆ 2007/200/9/200/10/201/2 ರ 5336.71 ಚ.ಮೀ. (ಸ್ವತ್ತಿನ ಸಂಖ್ಯೆ: 150200200600325054) ವಿಸ್ತೀರ್ಣದ ಪ್ರದೇಶದಲ್ಲಿ 'ವಸತಿ' ಉಪಯೋಗದ ನೆಲ+2 ಮೇಲಂತಸ್ತಿನ ಮೂರು ಕಟ್ಟಡ (ಬ್ಲಾಕ್-ಎ, ಬಿ ಮತ್ತು ಸಿ) ಕಟ್ಟಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿ ಉಲ್ಲೇಖ (1) ರಂತೆ ಅರ್ಜಿ ಸಲ್ಲಿಸಿದ್ದು, ಉಲ್ಲೇಖ (2) ರ ಈ ಪ್ರಾಧಿಕಾರದ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು ಪಾವತಿಸಿ, ಕಟ್ಟಡ ನೀಲಿ ನಕ್ಷೆಯ ಪ್ರತಿಗಳನ್ನು ಅರ್ಜಿದಾರರು/ಅಭಿಯಂತರರ ಸಹಿಗಳೊಂದಿಗೆ ಸಲ್ಲಿಸಲು ಸೂಚಿಸಲಾಗಿರುತ್ತದೆ.

ಉಲ್ಲೇಖ (3) ರಂತೆ ಅರ್ಜಿದಾರರು ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಪ್ರಶ್ನಿತ ನಿವೇಶನಕ್ಕೆ 'ವಸತಿ' ಉಪಯೋಗದ ನೆಲ+2 ಮೇಲಂತಸ್ತಿನ ಮೂರು ಕಟ್ಟಡ (ಬ್ಲಾಕ್-ಎ, ಬಿ ಮತ್ತು ಸಿ) ಕಟ್ಟಲು ಕಟ್ಟಡದ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಆದ್ದರಿಂದ, ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಗಿನ ನಿಬಂಧನೆಗಳೊಂದಿಗೆ ನೀಡಲಾಗಿದೆ.

### ನಿಬಂಧನೆಗಳು

1. ಯೋಜಿಸಿರುವ ಕಟ್ಟಡವನ್ನು 'ವಾಸದ' ಉದ್ದೇಶಕ್ಕಾಗಿಯೇ ಉಪಯೋಗಿಸಬೇಕು.

.....2

E-mail :dpa.dbpura2018@gmail.com Website : www.doddaballapur.tpa.gov.in

2. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ **ದಿನಾಂಕ: 30-03-2024** ರಿಂದ **29-03-2026 ರವರೆಗೆ** ಮಾತ್ರ ನೀಡಲಾಗಿರುತ್ತದೆ.

3. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ರಾಜಾನುಕುಂಟೆ ಗ್ರಾಮ** ಪಂಚಾಯ್ತಿರವರಿಂದ ಪಡೆಯದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಬಾರದು.

4. ಕಟ್ಟಡ ಕಟ್ಟಲು ಪರವಾನಿಗೆಯನ್ನು **ರಾಜಾನುಕುಂಟೆ ಗ್ರಾಮ** ಪಂಚಾಯ್ತಿಯಿಂದ ಪಡೆಯಬೇಕು.

5. ಕಟ್ಟಡವನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ಕಟ್ಟಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಯಾವುದೇ ಬದಲಾವಣೆಯನ್ನು ಮಾಡತಕ್ಕದ್ದಲ್ಲ.

6. 'ವಸತಿ' ಉಪಯೋಗಕ್ಕೆ ಕಟ್ಟಡ ಕಟ್ಟಲು ನಕ್ಷೆಯಲ್ಲಿ ಬಿಟ್ಟಿರುವಂತೆ ನಡುಜಾಗವನ್ನು ಬಿಟ್ಟು ಕಟ್ಟಡ ಕಟ್ಟತಕ್ಕದ್ದು.

7. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.

8. ಕಟ್ಟಡ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.

9. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಮಳೆಯ ನೀರು ಸ್ವಾಭಾವಿಕವಾಗಿ ಇಂಗಿ ಹೋಗಲು ವ್ಯವಸ್ಥೆ (Rain Water harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಗಿಡ/ಮರವನ್ನು ಬೆಳೆಸತಕ್ಕದ್ದು.

10. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.

11. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ನಕ್ಷೆಯು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು ಹಾಗೂ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.

12. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.

13. ಈ ಅನುಮತಿಯನ್ನು ಉಲ್ಲಂಘಿಸಿ ಅಭಿವೃದ್ಧಿಯನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.

.....3

ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎನ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೋಲಿಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.



14. ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ನಿರಾಕ್ಷೇಪಣಾ ಪತ್ರಗಳನ್ನು ಸಹ ಪಡೆಯತಕ್ಕದ್ದು.

15. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಪೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತಂತಾನೆ ರದ್ದಾಗುತ್ತದೆ.

Sd/- 30.03.24

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು,
ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ,
ದೊಡ್ಡಬಳ್ಳಾಪುರ.

30-03-24 30/3

*ಇವರಿಗೆ:*

**ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು,**
ರಾಜಾನುಕುಂಟೆ ಗ್ರಾಮ ಪಂಚಾಯ್ತಿ,
ಯಲಹಂಕ ತಾಲ್ಲೂಕು,
ಬೆಂಗಳೂರು ನಗರ ಜಿಲ್ಲೆ.

} ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

ಪ್ರತಿಯನ್ನು:

1) ಮೆ॥ ಸೂರ್ಯ ಡೆವಲಪರ್ಸ್ ಪರವಾಗಿ ಶ್ರೀ ಹೆಚ್. ಪ್ರಶಾಂತ್ ಕುಮಾರ್ ಬಿನ್ ಶಿವಾನಂದಯ್ಯ ಹೆಚ್., ನಂ. 58, ಪ್ರೇಸ್ಟೀಜ್ ಓಯಸೀಸ್, ರಾಜಾನುಕುಂಟೆ, ಅದ್ದೆವಿಶ್ವನಾಥಪುರ ರಸ್ತೆ, ಬೆಂಗಳೂರು ಉತ್ತರ – 560064.
2) ಕಛೇರಿ ಪ್ರತಿ.

E-mail :dpa.dbpura2018@gmail.com Website : www.doddaballapur.tpa.gov.in